# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 791 (698+891)

ಮಾನ್ಯ ಸದಸ್ಯರುಗಳ ಹೆಸರು : ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ) ಹಾಗೂ

ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ವಿಷಯ : ಎನ್.ಪಿ.ಎಸ್. ಯೋಜನೆ ರದ್ದುಗೊಳಿಸುವ ಬಗ್ಗೆ

ಉತ್ತರಿಸುವ ದಿನಾಂಕ : 12.03.2020

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; ಇದರಲ್ಲಿ ಎನ್.ಪಿ.ಎಸ್. ಪಿಂಚಣಿ ವ್ಯವಸ್ಥೆಗೆ ಒಳಪಟ್ಟ ನೌಕರರೆಷ್ಟು; | ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರ ಸಂಖ್ಯೆ – 5,12,521<br><br>ಎನ್.ಪಿ.ಎಸ್. ಯೋಜನೆಗೆ ಒಳಪಟ್ಟಿರುವ ನೌಕರರ ಸಂಖ್ಯೆ: 2,28,527. |
| ಆ) | ರಾಜ್ಯ ಸರ್ಕಾರಿ ನೌಕರರು ಎನ್.ಪಿ.ಎಸ್. ಯೋಜನೆಯನ್ನು ಕೈಬಿಟ್ಟು ಹಳೆ ಪಿಂಚಣಿ ಜಾರಿ ಮಾಡುವಂತೆ ನಡೆಸಿರುವ ಪ್ರತಿಭಟನೆಗಳು ಮತ್ತು ಸದರಿ ನೌಕರರ ಸಂಘಗಳು ಮಾಡಿರುವ ಮನವಿಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ವಹಿಸಿರುವ ಕ್ರಮಗಳೇನು; | ಸರ್ಕಾರದ ಗಮನಕ್ಕೆ ಬಂದಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018 ದಿನಾಂಕ: 11.12.2018 ರನ್ವಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ. ದಿನಾಂಕ: 27.09.2019 ರಂದು ಸಭೆ ನಡೆದಿದ್ದು, ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ. |
| ಇ) | ರಾಜ್ಯ ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ವ್ಯವಸ್ಥೆ ಜಾರಿ ಮಾಡಿದ್ದಲ್ಲಿ ಸರ್ಕಾರಕ್ಕೆ ಆಗಬಹುದಾದ ಲಾಭ-ನಷ್ಟಗಳ ಬಗ್ಗೆ ಪರಿಶೀಲಿಸಲು ಸಮಿತಿಯನ್ನು ರಚಿಸಲಾಗಿದೆಯೇ; ಯಾವಾಗ ರಚಿಸಲಾಯಿತು; (ವಿವರ ನೀಡುವುದು) | |

| | | |
|---|---|---|
| ಈ) | ಈ ಸಮಿತಿಗೆ ಸರ್ಕಾರ ನಿಗಧಿಪಡಿಸಿದ ಕಾಲಮಿತಿ ಎಷ್ಟು; ಸದರಿ ಸಮಿತಿಯು ಎಷ್ಟು ಸಭೆಗಳನ್ನು ನಡೆಸಿದೆ; ಹಾಗೂ ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ; ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು; | ಕಾಲಮಿತಿಯನ್ನು ನಿಗಧಿಪಡಿಸಿರುವುದಿಲ್ಲ. ಇದುವರೆಗೆ ಒಂದು ಸಭೆ ನಡೆದಿದೆ. ವರದಿ ಸಲ್ಲಿಕೆಯಾಗಿರುವುದಿಲ್ಲ. ಸಮಿತಿ ವರದಿಯ ನಂತರ ನಿರ್ಧರಿಸಲಾಗುವುದು. |
| ಉ) | ರಾಜ್ಯ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಯೋಜನೆಯನ್ನು ಜಾರಿ ಮಾಡುವಂತೆ ಕೇಂದ್ರ ಸರ್ಕಾರವು ಕಡ್ಡಾಯಗೊಳಿಸಿದೆಯೇ; ಕಡ್ಡಾಯಗೊಳಿಸಿದ್ದಲ್ಲಿ, ಈ ಸಂಬಂಧ ಕೇಂದ್ರ ಸರ್ಕಾರವು ಹೊರಡಿಸಿರುವ ಆದೇಶಗಳ ದಾಖಲೆಯನ್ನು ನೀಡುವುದು; | ರಾಜ್ಯ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಯೋಜನೆಯನ್ನು ಜಾರಿ ಮಾಡುವಂತೆ ಕೇಂದ್ರ ಸರ್ಕಾರವು ಕಡ್ಡಾಯಗೊಳಿಸಿರುವುದಿಲ್ಲ. |
| ಊ) | ಸರ್ಕಾರಿ ನೌಕರರಿಗೆ ಜಾರಿ ಮಾಡಿರುವ ಎನ್.ಪಿ.ಎಸ್. ಯೋಜನೆಯನ್ನು ಹಿಂಪಡೆದು ಹಳೆ ಪಿಂಚಣಿ ವ್ಯವಸ್ಥೆಯನ್ನು ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರ ನೀಡುವುದು) | ಕೇಂದ್ರ ಸರ್ಕಾರವು ಜಾರಿಗೊಳಿಸಿರುವ ನೂತನ ಪಿಂಚಣಿ ಯೋಜನೆಯನ್ವಯ ರಾಜ್ಯದಲ್ಲಿಯೂ ಈ ಯೋಜನೆಯನ್ನು 2006 ರಿಂದ ಅಳವಡಿಸಿಕೊಳ್ಳಲಾಗಿದೆ. ಈಗ ಈ ಯೋಜನೆಯನ್ನು ರದ್ದುಪಡಿಸಿದ್ದರೆ ಸರ್ಕಾರದ ಆರ್ಥಿಕ ಸ್ಥಿತಿಯ ಮೇಲೆ ತೀವ್ರ ಪರಿಣಾಮ ಬೀರುವ ಸಂಭವವಿರುತ್ತದೆ. |

ಸಂಖ್ಯೆ: ಆಇ 20 ಪಿಇಎನ್ 2020

(ಬಿ.ಎಸ್. ಯಡಿಯೂರಪ್ಪ)

ಮುಖ್ಯಮಂತ್ರಿ